# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ರಾಜ್ಯದ ವಿದ್ಯುತ್ ರಹಿತ ಮನೆಗಳಿಗೆ ಬೆಳಕು ಕಾರ್ಯಕ್ರಮದಡಿ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: Energy/606/VSC/2021 ದಿನಾಂಕ: 29.09.2021

******

<u>**ಪ್ರಸ್ತಾವನೆ:**</u>

ಮೇಲೆ ಓದಲಾದ ಆದೇಶದಲ್ಲಿ, ಬೆಳಕು ಕಾರ್ಯಕ್ರಮದಡಿ ರಾಜ್ಯದಲ್ಲಿದ್ದ ವಿದ್ಯುತ್ ಸಂಪರ್ಕ ಇಲ್ಲದಿರುವ ಬಡ ಕುಟುಂಬಗಳ ಮನೆಗಳಿಗೆ, ದೀನ ದಯಾಳ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ (ಡಿ.ಡಿ.ಯು.ಜಿ.ಜೆ.ವೈ) ಹಾಗೂ ಸೌಭಾಗ್ಯ ಯೋಜನೆಗಳ ಮಾದರಿಯಲ್ಲಿಯೇ ಫಲಾನುಭವಿಗಳಿಂದ ರೇಷನ್ ಕಾರ್ಡ್, ಆಧಾರ ಕಾರ್ಡ್, ವೋಟರ್ ಐ.ಡಿ, ಗ್ರಾಮ ಪಂಚಾಯತಿಯಿಂದ ಒದಗಿಸುವ ಪಟ್ಟಿ ಅಥವಾ ಇನ್ನಿತರೆ ದಾಖಲಾತಿಗಳನ್ನು ಪರಿಗಣಿಸಿ, ವಿದ್ಯುತ್ ಸರಬರಾಜು ಕಂಪನಿಗಳು ಬಂಡವಾಳ ಕಾಮಗಾರಿ ಮೊತ್ತ (CAPEX) ವನ್ನು ಬಳಸಿಕೊಂಡು ದಿನಾಂಕ:10.12.2021 ರೊಳಗಾಗಿ ವಿದ್ಯುತ್ ಸಂಪರ್ಕ ಕಲ್ಪಿಸಲು ಆದೇಶಿಸಲಾಗಿತ್ತು.

ಮುಂದುವರೆದು, ಎಲ್ಲಾ ಬಡ ಕುಟುಂಬದ ಮನೆಗಳಿಗೆ ಶೀಘ್ರವಾಗಿ ವಿದ್ಯುತ್ ಸಂಪರ್ಕ ಕಲ್ಪಿಸುವುದನ್ನು ರಾಜ್ಯ ಸರ್ಕಾರವು ಮನಗಂಡು, **2022-23 ನೇ ಸಾಲಿನ ಆಯವ್ಯಯದಲ್ಲಿ ಬೆಳಕು ಕಾರ್ಯಕ್ರಮದ ಕುರಿತು ಈ ಕೆಳಕಂಡಂತೆ ಘೋಷಿಸಿರುತ್ತದೆ.**

> "ವಿದ್ಯುತ್ ರಹಿತವೆಂದು ಗುರುತಿಸಲಾದ ರಾಜ್ಯದ 1.65 ಲಕ್ಷ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಜಾರಿಗೊಳಿಸಿದ ಬೆಳಕು ಕಾರ್ಯಕ್ರಮದಡಿಯಲ್ಲಿ 98,448 ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಉಳಿದಿರುವ ಎಲ್ಲಾ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು".

ಈ ಹಿನ್ನೆಲೆಯಲ್ಲಿ ಕೆಳಕಂಡ ಆದೇಶ,

<u>**ಸರ್ಕಾರಿ ಆದೇಶ ಸಂಖ್ಯೆ: Energy/169/VSC/2022,**</u>
<u>**ಬೆಂಗಳೂರು , ದಿನಾಂಕ: 05-04-2022**</u>.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23 ನೇ ಸಾಲಿನ ಆಯವ್ಯಯದಲ್ಲಿ ಬೆಳಕು ಕಾರ್ಯಕ್ರಮವನ್ನು ಘೋಷಿಸಿರುವುದರಿಂದ, ಬಡ ಕುಟುಂಬದ ಮನೆಗಳಿಗೆ ವಿದ್ಯುತ್ ಸಂಪರ್ಕ

....2

ಕಲ್ಪಿಸಲು ದಿನಾಂಕ: 10.12.2021 ರವರೆಗೆ ನೀಡಿದ್ದ ಅವಧಿಯನ್ನು ಮುಂದುವರೆಸಿ ಆರ್ಥಿಕ ವರ್ಷ 2022-23 ರವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

ಇನ್ನುಳಿದಂತೆ ಸರ್ಕಾರಿ ಆದೇಶ ಸಂಖ್ಯೆ: Energy/606/VSC/2021, ದಿನಾಂಕ:29-09-2021 ರ ಆದೇಶದಲ್ಲಿ ಯಾವುದೇ ಮಾರ್ಪಾಡು ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

N. Mangalagauri 5/4/22

(ಎನ್. ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ

ಇವರಿಗೆ:

1) ಸಂಚಾಲಕರು, ಸರ್ಕಾರಿ ಮುದ್ರಣಾಲಯ, ಕರ್ನಾಟಕ ರಾಜ್ಯಪತ್ರ ಪ್ರಕಟಣೆಗಾಗಿ

ಪ್ರತಿಗಳು:

1) ವ್ಯವಸ್ಥಾಪಕ ನಿರ್ದೇಶಕರು, ಕೆ.ಪಿ.ಟಿ.ಸಿ.ಎಲ್/ಕೆಪಿಸಿಎಲ್/ಬೆಸ್ಕಾಂ/ಸೆಸ್ಕ್/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ /ಹು.ಗ್ರಾ.ವಿ.ಸ.ಸಂ/ಪಿ.ಸಿ.ಕೆ.ಎಲ್/ಕ್ರೆಡಲ್
2) ನಿರ್ದೇಶಕರು (ತಾಂತ್ರಿಕ), EMC & PP Cell, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು
3) ನಿರ್ದೇಶಕರು (ಆರ್ಥಿಕ), ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು
4) ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ, ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಅಪರ ನಿರ್ದೇಶಕರು (ಎನ್.ಸಿ.ಇ) , ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು
7) ಜಂಟಿ ನಿರ್ದೇಶಕರು (ಇ.ಎಂ.ಸಿ/ಯೋಜನೆ), ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು
8) ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10) ಶಾಖಾ ರಕ್ಷಾ ಕಡತ/ ಕಛೇರಿ ಪ್ರತಿ